ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಸಾರಿಗೆ ಇಲಾಖೆ ಸಿಬ್ಬಂದಿಗಳಿಗೆ ಕೊರೋನಾ-19 ರೋಗದಿಂದ ಚೇತರಿಕೆಗೆ ತೆಗೆದುಕೊಂಡ ಕ್ರಮಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

599 (805) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊರೋನಾ-19 ರಿಂದ ಸಾರಿಗೆ ಇಲಾಖೆಯಲ್ಲಿ ಉದ್ಭವಿಸಿರುವ ಸಮಸ್ಯೆಗಳಾವುವು; ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು; (ವಿವರವಾದ ಮಾಹಿತಿ ನೀಡುವುದು)

(ಆ) ಸಾರಿಗೆ ಇಲಾಖೆ ಸಿಬ್ಬಂದಿಗಳಿಗೆ ಕೊರೋನಾ-19 ರಿಂದ ಜೀವ ರಕ್ಷಿಸಿಕೊಳ್ಳಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ; ಈ ಸಂಬಂಧ ಸರ್ಕಾರ ಎಷ್ಟು ಮೊತ್ತವನ್ನು ಖರ್ಚು ಮಾಡಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಸಾರ್ವಜನಿಕ ಬಸ್ಸುಗಳಲ್ಲಿ ಸಾಮಾಜಿಕ ಅಂತರ ಕಾಪಾಡುವ ಸಂಬಂಧ ಇಲಾಖೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; ಬಸ್ಸಿನಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆಯನ್ನು ಕಡಿತಗೊಳಿಸಲಾಗಿದೆಯೇ; ಇದರಿಂದ ಇಲಾಖೆಗೆ ಆಗಿರುವ ಲಾಭ ಮತ್ತು ನಷ್ಟವೇನು; ಇದನ್ನು ಸರಿದೂಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು;

(ಈ) ಕೊರೋನಾ-19 ರಿಂದ ಸಾರಿಗೆ ಇಲಾಖೆಗೆ ಆದ ನಷ್ಟವೆಷ್ಟು; (ನಿಗಮವಾರು ಮಾಹಿತಿ ನೀಡುವುದು)

(ಉ) ಇದನ್ನು ಯಾವ ರೀತಿ ಸರಿದೂಗಿಸಲಾಗುವುದು?